ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಅಕ್ರಮವಾಗಿ ಗಣಿಗಾರಿಕೆಯನ್ನು ನಡೆಸುತ್ತಿರುವ ಬಗ್ಗೆ

ಶ್ರೀ ಬಿ. ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

918(1058) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿಗೆ ಕುಡಿಯುವ ನೀರೊದಗಿಸುತ್ತಿದ್ದ ತಿಪ್ಪಗೊಂಡನಹಳ್ಳಿ ಕೆರೆ (ಚಾಮರಾಜ ಸಾಗರ) ಮತ್ತು ಮಂಚನ ಬೆಲೆ ಡ್ಯಾಂ ಸುತ್ತುಲು ಇರುವ ಬೆಟ್ಟ ಗುಡ್ಡಗಳಲ್ಲಿ ಜೆಲ್ಲಿ ಮತ್ತು ಎಮ್‌ಸ್ಯಾಂಡ್ ಉತ್ಪತ್ತಿಯ ಕಲ್ಲು ಕ್ವಾರಿ ಕಲ್ಲುಗಣಿಯ ಕ್ರಶರ್‌ಗಳು ಅಕ್ರಮವಾಗಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಡ್ಯಾಂಗಳ ಕನಿಷ್ಠ 10 ಕಿ.ಮೀ. ಸುತ್ತ ಮುತ್ತ ಕಲ್ಲು ಕ್ವಾರಿ ಕಲ್ಲುಗಣಿಗಾರಿಕೆ ನಿಷೇದದ ಬಗ್ಗೆ ಸರ್ಕಾರದ ಮತ್ತು ನ್ಯಾಯಾಲಯದ ಆದೇಶಗಳು ಪಾಲನೆಯಾಗಿವೆಯೇ;

(ಇ) ಇಲ್ಲದಿದ್ದ ಪಕ್ಷದಲ್ಲಿ ಅಕ್ರಮವಾಗಿ ಗಣಿಗಾರಿಕೆಯನ್ನು ನಡೆಸುವವರ ವಿರುದ್ಧ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ?